ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2019–20 ದಿನಾಂಕ: 14–02–2020

**ಪತ್ರಿಕಾ ಆಮಂತ್ರಣ**

1. ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯ 2014ನೇ ಬ್ಯಾಚ್ ಪದವಿ ಪ್ರದಾನ ಸಮಾರಂಭ:

ಉಪಸ್ಥಿತಿ:

ಡಾ. ಸಿ.ಎನ್. ಅಶ್ವಥ್ ನಾರಾಯಣ್,
ಉಪ ಮುಖ್ಯಮಂತ್ರಿಗಳು,
ಉನ್ನತ ಶಿಕ್ಷಣ, ಐಟಿ ಮತ್ತು ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ

ಡಾ. ಕೆ. ಸುಧಾಕರ್,
ವೈದ್ಯಕೀಯ ಶಿಕ್ಷಣ ಸಚಿವರು.

ಗೌರವಾನ್ವಿತ ಅತಿಥಿಗಳು:

ಡಾ. ಬಿ.ಎನ್. ಗಂಗಾಧರ್,
ನಿರ್ದೇಶಕರು,
ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನಗಳ ಸಂಸ್ಥೆ

ಶ್ರೀಮತಿ ಸುಧಾಮೂರ್ತಿ,
ಅಧ್ಯಕ್ಷರು,
ಇನ್‌ಫೋಸಿಸ್ ಫೌಂಡೇಷನ್

ದಿನಾಂಕ : 15–02–2020, ಶನಿವಾರ , ಸಮಯ: ಬೆಳಿಗ್ಗೆ 9–00 ಗಂಟೆಗೆ

ಸ್ಥಳ: ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯ ಆವರಣ, ಕೆ.ಆರ್.ರಸ್ತೆ, ಬೆಂಗಳೂರು

2. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಮನೆಯಂಗಳದಲ್ಲಿ ಮಾತುಕತೆ ಕಾರ್ಯಕ್ರಮ:

ತಿಂಗಳ ಅತಿಥಿ:

ಶ್ರೀಮತಿ ಮಾತಾ ಬಿ. ಮಂಜಮ್ಮ ಜೋಗತಿ,
ಅಧ್ಯಕ್ಷರು, ಕರ್ನಾಟಕ ಜಾನಪದ ಅಕಾಡೆಮಿ
ಬೆಂಗಳೂರು.

ದಿನಾಂಕ : 15-02-2020, ಶನಿವಾರ, ಸಮಯ : ಸಂಜೆ 4-00 ಗಂಟೆಗೆ
ಸ್ಥಳ: ನಯನ ಸಭಾಂಗಣ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು.

3. 2019ನೇ ಸಾಲಿನ ಕರ್ನಾಟಕ ರಾಜ್ಯ ಪೊಲೀಸ್ ವಾರ್ಷಿಕ ಕ್ರೀಡಾಕೂಟದ ಸಮರೋಪ ಸಮಾರಂಭ:

ಮುಖ್ಯ ಅತಿಥಿ

ಬಸವರಾಜ ಬೊಮ್ಮಾಯಿ
ಗೃಹ ಸಚಿವರು,

ಕ್ರೀಡಾಪಟುಗಳಿಗೆ ಬಹುಮಾನ ವಿತರಣೆ

ಶ್ರೀಮತಿ ಚನ್ನಮ್ಮ ಬಿ. ಬೊಮ್ಮಾಯಿ

ದಿನಾಂಕ : 15-02-2020, ಶನಿವಾರ, ಸಮಯ : ಸಂಜೆ 4-30 ಗಂಟೆಗೆ
ಸ್ಥಳ: ಕೆ.ಎಸ್.ಆರ್.ಪಿ. ಕ್ರೀಡಾಂಗಣ, ಕೋರಮಂಗಲ, ಬೆಂಗಳೂರು.

4. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಸಂತ ಸೇವಾಲಾಲ್ ಜಯಂತೋತ್ಸವ ಕಾರ್ಯಕ್ರಮ:

ಉದ್ಘಾಟನೆ:

ಬಿ.ಎಸ್. ಯಡಿಯುರಪ್ಪ,
ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಘನ ಉಪಸ್ಥಿತಿ:

ಡಿ.ವಿ. ಸದಾನಂದ ಗೌಡ,
ರಾಸಾಯನಿಕ ಮತ್ತು ರಸಗೊಬ್ಬರ ಸಚಿವರು, ಭಾರತ ಸರ್ಕಾರ

ಶ್ರೀಮತಿ ನಿರ್ಮಲಾ ಸೀತಾರಾಮನ್
ಹಣಕಾಸು ಸಚಿವರು, ಭಾರತ ಸರ್ಕಾರ

ಅಧ್ಯಕ್ಷತೆ:
ಉದಯ್ ಬಿ. ಗರುಡಾಚಾರ್,
ಶಾಸಕರು,
ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ.

ದಿನಾಂಕ : 15-02-2020, ಶನಿವಾರ, ಸಮಯ : ಸಂಜೆ 5-00 ಗಂಟೆಗೆ
ಸ್ಥಳ: ರವೀಂದ್ರ ಕಲಾಕ್ಷೇತ್ರ, ಜೆ. ಸಿ. ರಸ್ತೆ, ಬೆಂಗಳೂರು.

ಪತ್ರಿಕಾ ಪ್ರಕಟಣೆ

## ರಾಜ್ಯ ವಿಧಾನಸಭೆಯಲ್ಲಿ ಮಾರ್ಚ್ 2 ಮತ್ತು 3 ರಂದು ಸಂವಿಧಾನ ಕುರಿತ ವಿಶೇಷ ಚರ್ಚೆಗೆ ಅವಕಾಶ: ವಿಶ್ವೇಶ್ವರ ಹೆಗಡೆ ಕಾಗೇರಿ

ಬೆಂಗಳೂರು, ಫೆಬ್ರವರಿ 14 (ಕರ್ನಾಟಕ ವಾರ್ತೆ)

ರಾಜ್ಯ ವಿಧಾನಸಭೆಯಲ್ಲಿ ಮಾರ್ಚ್ 2 ಮತ್ತು 3 ರಂದು ಭಾರತ ಸಂವಿಧಾನದ ಆಶಯಗಳು, ಸ್ವರೂಪ ಹಾಗೂ ಸಾಕಾರ ಕುರಿತಂತೆ ಎರಡು ದಿನಗಳ ವಿಶೇಷ ಚರ್ಚೆಗೆ ಅವಕಾಶ ಕಲ್ಪಿಸಲಾಗಿದೆ ಎಂದು ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷ ವಿಶ್ವೇಶರ ಹೆಗಡೆ ಕಾಗೇರಿ ಅವರು ಇಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಪ್ರಕಟಿಸಿದರು.

ಭಾರತ ಸಂವಿಧಾನ ಅಂಗೀಕಾರ ಮತ್ತು ಅನುಷ್ಠಾನಗೊಂಡು ಏಳು ದಶಕಗಳು ಪೂರ್ಣಗೊಂಡಿರುವ ಹಿನ್ನಲೆಯಲ್ಲಿ ಎರಡು ದಿನಗಳ ರಾಜಕೀಯೇತರ ಈ ವಿಶೇಷ ಚರ್ಚೆಗೆ ಅವಕಾಶ ಕಲ್ಪಿಸಲಾಗಿದೆ. ಸದನ ಕಲಾಪ ಸಲಹಾ ಸಮಿತಿಯಲ್ಲಿ ಕಾರ್ಯಕ್ರಮದ ರೂಪುರೇಷಗಳ ಬಗ್ಗೆ ಚರ್ಚಿಸಿ, ರಚನಾತ್ಮಕ ಚರ್ಚೆಗೆ ನೀಲನಕ್ಷೆ ಸಿದ್ದಪಡಿಸಲಾಗುವುದು ಎಂದು ಅವರು ತಿಳಿಸಿದರು.

ಫೆಬ್ರವರಿ 17 ರಂದು ರಾಜ್ಯಪಾಲ ವಜೂಭಾಯಿ ವಾಲ ಅವರು ಉಭಯ ಸಧನಗಳ ಸದಸ್ಯರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ, ಅದೇ ದಿನ ಅಪರಾಹ್ನ ಅಗಲಿದ ಚೇತನಗಳಿಗೆ ಶ್ರದ್ದಾಂಜಲಿ ಅರ್ಪಿಸಲಾಗುವುದು. ನಂತರ ರಾಜ್ಯಪಾಲರ ಭಾಷಣ ಕುರಿತು ಚರ್ಚೆ ಹಾಗೂ ರಾಜ್ಯಪಾಲರ ಭಾಷಣದ ಮೇಲಿನ ವಂದನಾ ನಿರ್ಣಯ ಕಾರ್ಯಕ್ರಮಗಳು ಫೆಬ್ರವರಿ 20 ರ ವರೆಗೆ ನಡೆಯಲಿದೆ. ತದನಂತರ ಮಾರ್ಚ್ 2 ರಂದು ಮರು ಸಮಾವೇಶಗೊಳ್ಳಲಿರುವ ಅಧಿವೇಶನದಲ್ಲಿ ಮಾರ್ಚ್ 5 ರಂದು ಹಣಕಾಸು ಖಾತೆಯನ್ನು ಹೊತ್ತ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು 2020-21 ನೇ ಸಾಲಿನ ಆಯವ್ಯಯವನ್ನು ಮಂಡಿಸಲಿದ್ದಾರೆ. ಕರ್ನಾಟಕ ಲೋಕಾಯುಕ್ತ ವಿಧೇಯಕವೂ ಒಳಗೊಂಡಂತೆ ಆರು ವಿಧೇಯಕಗಳು ಸದನದಲ್ಲಿ ಮಂಡಿಸಿ ಪರಿಶೀಲನೆಗೆ ಒಳಪಡಿಸಲು ಯೋಜಿಸಲಾಗಿದೆ. ಮಾರ್ಚ್ 31 ರ ವರೆಗೆ ಸದನವು ನಡೆಯಲಿದೆ. ಇಪ್ಪತ್ತೈದು ದಿನಗಳ ಕಾಲ ನಡೆಯಲಿರುವ ಈ ಅಧಿವೇಶನದಲ್ಲಿ ರಾಜ್ಯದ ಅಭಿವೃದ್ಧಿ ಕುರಿತ ಚರ್ಚೆಗೆ ವಿಪುಲ ಅವಕಾಶ ದೊರೆಯಲಿದೆ ಎಂದರು.

ಲೋಕಸಭೆ ಮತ್ತು ರಾಜ್ಯಸಭೆ ಮಾದರಿಯಲ್ಲಿಯೇ ಸದನ ನಡೆಯಬೇಕೆಂಬ ಹಿನ್ನಲೆಯಲ್ಲಿ ಖಾಸಗಿ ಮಾಧ್ಯಮಗಳ ಕ್ಯಾಮರಾಗಳಿಗೆ ಸದನದ ಅಂಗಳದಲ್ಲಿ ಪ್ರವೇಶಕ್ಕೆ ಅವಕಾಶವಿರುವುದಿಲ್ಲ. ಆದರೆ, ದೂರದರ್ಶನವು ಕಲಾಪವನ್ನು ಚಿತ್ರೀಕರಿಸಿ ಬ್ರಾಂಡ್‌ವಿಡ್ತ್ ಸಂಕೇತಗಳ ಮೂಲಕ ಖಾಸಗಿ ವಾಹಿನಿಗಳಿಗೆ ಕಲಾಪದ ಚಿತ್ರಣವನ್ನು ನೀಡಲಿದೆ ಎಂದು ಸಭಾಧ್ಯಕ್ಷರು ಸ್ಪಷ್ಟಪಡಿಸಿದರು.

ರಾಜ್ಯ ವಿಧಾನಸಭಾ ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿ ಅವರು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

## ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳ ಸ್ಥಿತಿ ಉತ್ತಮವಾಗಿದೆ
## ರಾಷ್ಟ್ರೀಯ ಪರಿಶಿಷ್ಟ ಜಾತಿ ಆಯೋಗದ ಅಧ್ಯಕ್ಷ ರಾಮ್‌ಶಂಕರ್ ಕಥೇರಿಯಾ ಅಭಿಮತ

ಬೆಂಗಳೂರು, ಫೆಬ್ರವರಿ 14 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿರುವ ಪರಿಶಿಷ್ಟ ಜಾತಿಗೆ ಸೇರಿದ ಜನರ ಸಮಸ್ಯೆಗಳು ಹಾಗೂ ಅವರಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ನ್ಯಾಯಯುತವಾಗಿ ದೊರೆಯಬೇಕಾದ ಸವಲತ್ತು ಸೌಲಭ್ಯಗಳ ಕುರಿತಂತೆ ರಾಷ್ಟ್ರೀಯ ಪರಿಶಿಷ್ಟ ಜಾತಿ ಆಯೋಗವು ಎರಡು ದಿನಗಳ ಕಾಲ ರಾಜ್ಯಕ್ಕೆ ಬೇಟಿ ನೀಡಿ ವಿವಿಧ ಸಂಘಟನೆಗಳ ಮುಖಂಡರು ಹಾಗೂ ಸರ್ಕಾರದ ಉನ್ನತ ಅಧಿಕಾರಿಗಳೊಂದಿಗೆ ಸಭೆ ನಡೆಸಿತು.

ನಿನ್ನೆ ಹಾಗೂ ಇಂದು ನಿರಂತರ ಸಭೆಗಳ ನಂತರ ರಾಜ್ಯದಲ್ಲಿರುವ ಸ್ಥಿತಿಗತಿಗಳನ್ನು ಪರಿಶೀಲಿಸಿ ಬಳಿಕ ಪತ್ರಕರ್ತರೊಂದಿಗೆ ಮಾತನಾಡಿದ ರಾಷ್ಟ್ರೀಯ ಪರಿಶಿಷ್ಟ ಜಾತಿ ಆಯೋಗದ ಅಧ್ಯಕ್ಷರಾದ ರಾಮ್‌ಶಂಕರ್ ಕಥೇರಿಯಾ ಅವರು ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳಿಗೆ ಬಜೆಟ್ ಹಂಚಿಕೆ ಬೇರೆ ರಾಜ್ಯಗಳಿಗೆ ಹೋಲಿಸಿದರೆ ಉತ್ತಮವಾಗಿದೆ. ಕರ್ನಾಟಕದಲ್ಲಿನ ಜನಸಂಖ್ಯೆಗೆ ಅನುಗುಣವಾಗಿ ಬಜೆಟ್‌ನಲ್ಲಿ ಹಂಚಿಕೆಯಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಶೇ 17.15 ರಷ್ಟು ಪರಿಶಿಷ್ಟ ಜಾತಿ ಜನಸಂಖ್ಯೆ ಇದ್ದು ಶೇಕಡ 17 ರಷ್ಟು ಬಜೆಟ್ ಮೀಸಲಿರಿಸಲಾಗಿದೆ. ಇದೊಂದು ಸಂತಸದ ವಿಚಾರವಾಗಿದ್ದು, ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗಾಗಿ ಹಾಸ್ಟೆಲ್ ವ್ಯವಸ್ಥೆ, ವಿದ್ಯಾರ್ಥಿ ವೇತನ ವಿತರಣೆ ಹಾಗೂ ಸಮುದಾಯ ಭವನ ನಿರ್ಮಾಣದಲ್ಲೂ ಕರ್ನಾಟಕದ ಸ್ಥಿತಿ ಉತ್ತಮವಾಗಿದೆ.

ಬ್ಯಾಂಕ್ ಸಾಲ ಮತ್ತು ಹೊಸ ಸ್ವಂತ ಉದ್ಯೋಗಗಳ ಆರಂಭಿಸುವ ವಿಚಾರದಲ್ಲಿ ಮಾತ್ರ ಕರ್ನಾಟಕದ ಪರಿಶಿಷ್ಟ ಜಾತಿಗಳ ಯುವಕರು ಸದುಪಯೋಗಪಡಿಸಿಕೊಳ್ಳುವಲ್ಲಿ ಹಿಂದೆ ಬಿದ್ದಿದ್ದಾರೆ. ಕೇಂದ್ರ ಸರ್ಕಾರದ ಯೋಜನೆಗಳಾದ ಮುದ್ರಾ ಲೋನ್, ಸ್ಟಾರ್ಟ್ ಅಪ್ ಸಾಲ ವಿಚಾರದಲ್ಲಿ ಪರಿಶಿಷ್ಟರಿಗೆ ಸೌಲಭ್ಯ ನಿರೀಕ್ಷಿತ ಮಟ್ಟದಲ್ಲಿ ಸಿಕ್ಕಿಲ್ಲ. ಈ ಸಂಬಂಧ ರಾಜ್ಯ ಮುಖ್ಯ ಕಾರ್ಯದರ್ಶಿಯವರಿಗೆ ಕ್ರಮಕೈಗೊಳ್ಳಲು ಸೂಚಿಸಿದ್ದು, ತಕ್ಷಣವೇ ಬ್ಯಾಂಕ್ ಮುಖ್ಯಸ್ಥರ ಸಭೆ ಕರೆದು ಸೂಚನೆ ನೀಡುವಂತೆ ತಿಳಿಸಿರುವೆ ಎಂದು ಹೇಳಿದರು.

ರಾಜ್ಯದಲ್ಲಿ ಮುದ್ರಾ ಯೋಜನೆಯಡಿ ಒಟ್ಟು 11 ಸಾವಿರ ಅರ್ಜಿ ಸಲ್ಲಿಕೆಯಾಗಿದ್ದು, ಕೇವಲ 88 ಮಂದಿ ಮಾತ್ರ ಸಾಲ ಪಡೆದುಕೊಂಡಿದ್ದಾರೆ. ಇದು ಪ್ರಧಾನಿಯವರ ಮಹತ್ವಾಂಕ್ಷೆ ಯೋಜನೆಯಾಗಿದ್ದು ಹೆಚ್ಚು ಗಮನಕೊಡುವಂತೆ ಸೂಚಿಸಲಾಗಿದೆ.

ರಾಜ್ಯದಲ್ಲಿ ಪ್ರಧಾನ ಮಂತ್ರಿ ಆವಾಜ್ ಯೋಜನೆ, ಉಜ್ವಲ ಯೋಜನೆಯಲ್ಲಿ ಪರಿಶಿಷ್ಟರಿಗೆ ಅವಕಾಶಗಳು ಸಿಕ್ಕಿರುವುದು ತೃಪ್ತಿಕರವಾಗಿದೆ. ಪೊಲೀಸ್ ಅಧಿಕಾರಿಗಳೊಂದಿಗೆ ಜತೆ ಸಭೆ ನಡೆಸಿದ್ದು, ಪರಿಶಿಷ್ಟರ ಮೇಲಿನ ಕೊಲೆ ಮತ್ತು ಅತ್ಯಾಚಾರ ಪ್ರಕರಣದ ಅಂಕಿ ಆಂಶ ಪರಿಶೀಲಿಸಲಾಯಿತು. ದೇಶದ ಅಂಕಿ ಅಂಶಕ್ಕೆ ಹೋಲಿಸಿದರೆ ಕರ್ನಾಟಕದ ಸ್ಥಿತಿ ಉತ್ತಮವಾಗಿದೆ.

ನಕಲಿ ಪ್ರಮಾಣ ಪತ್ರ ಬಳಸುವವರ ಬಗ್ಗೆ ಗಂಭೀರ ಕ್ರಮಕೈಗೊಳ್ಳಬೇಕು. ಪರಿಶೀಲನೆಗೆ ರಾಜ್ಯ ಮಟ್ಟದಲ್ಲಿ ಸಮಿತಿ ರಚಿಸಬೇಕು. ತಪ್ಪಿತಸ್ಥರ ಮೇಲೆ ಎಫ್.ಐ.ಆರ್. ದಾಖಲಿಸಿ ಕೆಲಸದಿಂದ ವಜಾ ಮಾಡಬೇಕು ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ರಾಷ್ಟ್ರೀಯ ಪರಿಶಿಷ್ಟ ಜಾತಿ ಆಯೋಗದ ಸದಸ್ಯರು, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ.ಎಮ್. ವಿಜಯ್ ಭಾಸ್ಕರ್ ಸೇರಿದಂತೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಉನ್ನತ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

## ಜಲಸಂಪನ್ಮೂಲ ಸಚಿವ ರಮೇಶ್ ಜಾರಕಿಹೊಳಿ ಅವರ ಅಧಿಕೃತ ಕಚೇರಿ ಆರಂಭ

ಬೆಂಗಳೂರು, ಫೆಬ್ರವರಿ 14 (ಕರ್ನಾಟಕ ವಾರ್ತೆ)

ಜಲ ಸಂಪನ್ಮೂಲ ಸಚಿವರಾದ ರಮೇಶ್ ಜಾರಕಿಹೊಳಿ ಅವರು ವಿಧಾನಸೌಧದಲ್ಲಿರುವ ಕೊಠಡಿ ಸಂಖ್ಯೆ 342ರಲ್ಲಿ ತಮ್ಮ ಅಧಿಕೃತ ಕಚೇರಿಯನ್ನು ಕಾರ್ಯಾರಂಭ ಮಾಡಿದರು.

ಈ ಸಮಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಕನಾಟಕ ರಾಜ್ಯದ ಹಲವು ಜ್ವಲಂತ ನೀರಾವರಿ ಸಮಸ್ಯೆಗಳ ಪರಿಹಾರಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ರಾಜ್ಯದ ಕಾವೇರಿ, ಕೃಷ್ಣ, ಮಹದಾಯಿ ಸೇರಿದಂತೆ ಎಲ್ಲಾ ನದಿ ನೀರು ಹಂಚಿಕೆ ವಿಚಾರದಲ್ಲಿ

ಕರ್ನಾಟಕಕ್ಕೆ ನ್ಯಾಯ ಒದಗಿಸಿ, ಜನತೆಗೆ ವಿಶೇಷವಾಗಿ ರೈತರಿಗೆ ಅನುಕೂಲವಾಗುವಂತೆ ಕರ್ತವ್ಯವನ್ನು ನಿಭಾಯಿಸುವುದಾಗಿ ತಿಳಿಸಿದರು

ನೀರಾವರಿ ಯೋಜನೆಗಳಿಗೆ ಆದ್ಯತೆ, ಸರ್ವೋಚ್ಚ ನ್ಯಾಯಾಲಯದಲ್ಲಿರುವ ನೀರು ಹಂಚಿಕೆ ಪ್ರಕರಣಗಳತ್ತ ವಿಶೇಷ ಗಮನ ಹರಿಸಲಾಗುವುದು. ಜನತೆಗೆ ಮತ್ತು ರಾಜ್ಯದ ಭೂಮಿಗೆ ನೀರುಣಿಸುವುದು ಮತ್ತು ರಾಜ್ಯದ ಜನರ ಕಣ್ಣೀರ ಒರೆಸುವುದು ಎರಡೂ ನನ್ನ ಕರ್ತವ್ಯ ಮತ್ತು ಜವಾಬ್ದಾರಿ ಎಂದು ಭಾವಿಸಿರುವೆ. ಇದಕ್ಕಾಗಿ ಜನತೆಯ ಸಹಕಾರ ಸಹ ಕೋರುವೆ ಎಂದು ಹೇಳಿದರು.

## ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ

ಬೆಂಗಳೂರು, ಫೆಬ್ರವರಿ 14 (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಫೆಬ್ರವರಿ 19 ರ ಬುಧವಾರದಂದು ಬೆಳಿಗ್ಗೆ 11.30 ಗಂಟೆಗೆ ನಗರದ ರವೀಂದ್ರ ಕಲಾಕ್ಷೇತ್ರ, ಜೆ.ಸಿ. ರಸ್ತೆ, ಬೆಂಗಳೂರು ಇಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಯನ್ನು ಹಮ್ಮಿಕೊಳ್ಳಲಾಗಿದೆ.

ಶ್ರೀ ಶ್ರೀ ಮಂಜುನಾಥ ಸ್ವಾಮೀಜಿ, ಗೋಸಾಯಿ ಮಹಾಸಂಸ್ಥಾನಮಠ, ಶ್ರೀಭವಾನಿಪೀಠ, ಬೆಂಗಳೂರು ಇವರ ಸಾನಿಧ್ಯದಲ್ಲಿ ನಡೆಯಲಿದೆ.

ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಯನ್ನು ಉದ್ಘಾಟಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ರಾಸಾಯನಿಕ ಮತ್ತು ರಸಗೊಬ್ಬರ ಸಚಿವರು ಡಿ.ವಿ. ಸದಾನಂದ ಗೌಡ, ಹಣಕಾಸು ಸಚಿವೆ ಶ್ರೀಮತಿ ನಿರ್ಮಲಾ ಸೀತಾರಾಮನ್ ಅವರುಗಳು ಉಪಸ್ಥಿತರಿರುವರು

ರಾಜ್ಯದ ಉಪ ಮುಖ್ಯಮಂತ್ರಿಗಳು ಹಾಗೂ ಅನೇಕ ಸಚಿವ ಸಂಪುಟ ಸದಸ್ಯರು ಸೇರಿದಂತೆ ಇನ್ನಿತರ ಗಣ್ಯರು ಈ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು

ಈ ಜಯಂತಿ ಸಮಾರಂಭದ ಅಧ್ಯಕ್ಷತೆಯನ್ನು ಚಿಕ್ಕಪೇಟೆ ವಿಧಾನಸಭಾ ಸದಸ್ಯ ಉದಯ್ ಬಿ. ಗರುಡಾಚಾರ್ ಅವರು ವಹಿಸುವರು.

## ಸಚಿವರ ಪ್ರವಾಸ

ಬೆಂಗಳೂರು, ಫೆಬ್ರವರಿ 14 (ಕರ್ನಾಟಕ ವಾರ್ತೆ)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಹಾಗು ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವರು ಆದ ಎಸ್. ಸುರೇಶ್ ಕುಮಾರ್ ಅವರು ಫೆಬ್ರವರಿ 15 ರಂದು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅದೇ ದಿನ ನಗರಕ್ಕೆ ಹಿಂದಿರುಗಲಿದ್ದಾರೆ.

## ಸಚಿವರ ಪ್ರವಾಸ

ಬೆಂಗಳೂರು, ಫೆಬ್ರವರಿ 14 (ಕರ್ನಾಟಕ ವಾರ್ತೆ)

ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ, ಯುವಜನ ಸಬಲೀಕರಣ ಮತ್ತು ಕ್ರೀಡೆ ಹಾಗೂ ಚಿಕ್ಕಮಗಳೂರು ಜಿಲ್ಲ ಉಸ್ತುವಾರಿ ಸಚಿವರು ಆದ ಸಿ.ಟಿ. ರವಿ ಅವರು ಫೆಬ್ರವರಿ 15 ಮತ್ತು 16 ರಂದು ಮೈಸೂರು ಹಾಗೂ ಶಿವಮೊಗ್ಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು, ಫೆಬ್ರವರಿ 16 ರಂದೇ ನಗರಕ್ಕೆ ಹಿಂದಿರುಗಲಿದ್ದಾರೆ.

## ಸಚಿವರ ಪ್ರವಾಸ

ಬೆಂಗಳೂರು, ಫೆಬ್ರವರಿ 14 (ಕರ್ನಾಟಕ ವಾರ್ತೆ)

ವಸತಿ ಸಚಿವರು ಹಾಗೂ ಮೈಸೂರು ಮತ್ತು ಮಡಿಕೇರಿ ಜಿಲ್ಲಾ ಉಸ್ತುವಾರಿ ಸಚಿವರು ಆದ ವಿ. ಸೋಮಣ್ಣ ಅವರು ಫೆಬ್ರವರಿ 15 ರಂದು ಮೈಸೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು, ಅದೇ ದಿನ ನಗರಕ್ಕೆ ಹಿಂದಿರುಗಲಿದ್ದಾರೆ.

# "ಜಲಸೇನಾನಿ"

ಬೆಂಗಳೂರು, ಫೆಬ್ರವರಿ 14 (ಕರ್ನಾಟಕ ವಾರ್ತೆ):

ನೀರಿನ ಸಂರಕ್ಷಣೆ, ಮಳೆ ನೀರು ಕೊಯ್ಲು ಅಳವಡಿಕೆ, ಸಂಸ್ಕರಿಸಿದ ತ್ಯಾಜ್ಯ ನೀರಿನ ಪುನರ್ ಬಳಕೆ ಹಾಗೂ ನೀರು ಸರಬರಾಜು ಮತ್ತು ಒಳಚರಂಡಿ ನಿರ್ವಹಣೆಯ ಸಮಸ್ಯೆಯ ಬಗ್ಗೆ ಮನೆ ಮನೆಗಳಿಗೆ ತೆರಳ ಅರಿವು ಮೂಡಿಸುವ ಉದ್ದೇಶದಿಂದ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳ ಸ್ವಯಂಸೇವಕರಾಗಿ ಕೆಲಸ ನಿರ್ವಹಿಸುವ "ಜಲಸೇನಾನಿ" ಜನಸ್ನೇಹಿ ಯೋಜನೆಯನ್ನು ಆರಂಭಿಸಿದ್ದು, ಆಸಕ್ತರಿಂದ ನೋಂದಣಿಗೆ ಅವಕಾಶ ನೀಡಲಾಗಿದೆ.

ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಜನಸ್ನೇಹಿ ಕಾರ್ಯಕ್ರಮಗಳನ್ನು ಹಾಗೂ ಸಾರ್ವಜನಿಕರಿಗೆ ಮಂಡಳಿಯ ಕಾರ್ಯಚಟುವಟಿಕೆಗಳಾದ ನೀರು ಸರಬರಾಜು ಮತ್ತು ಒಳಚರಂಡಿ ನಿರ್ವಹಣೆಯ ಹಾಗೂ ನೀರಿನ ಸಂರಕ್ಷಣೆ, ಮಳೆನೀರು ಕೊಯ್ಲು ಅಳವಡಿಕೆ, ಸಂಸ್ಕರಿಸಿದ ತ್ಯಾಜ್ಯ ನೀರಿನ ಪುನರ್ ಬಳಕೆ, ಸಾರ್ವಜನಿಕರಿಂದ ನೀರಿನ ಸೋರುವಿಕೆ ಮತ್ತು ಒಳಚರಂಡಿ ಸಮಸ್ಯೆಯ ಬಗ್ಗೆ ಮಾಹಿತಿ ಪಡೆದುಕೊಳ್ಳುವುದು ಹಾಗೂ ಆ ಪ್ರದೇಶಗಳಲ್ಲಿನ ಅನಧೀಕೃತ ನೀರಿನ ಸಂಪರ್ಕಗಳ ವಿವರ ಮತ್ತು ಮನೆಗಳಲ್ಲಿನ ನೀರು ಶೇಖರಣಾ ತೊಟ್ಟಿಗಳು ಹಾಗೂ ಮೇಲ್ಭಾಗದ ತೊಟ್ಟಿಗಳಲ್ಲಿ ನೀರು ಹೊರಚೆಲ್ಲುವಿಕೆಯ ಬಗ್ಗೆ ಮನೆ ಮನೆಗಳಿಗೆ ತೆರಳ ಅವುಗಳ ಮಾಹಿತಿಯನ್ನು ಅಧಿಕೃತವಾಗಿ ಮಂಡಳಿಗೆ ನೀಡುವ ಪ್ರಕ್ರಿಯೆಯಲ್ಲಿ ಸ್ವಯಂಸೇವಕ "ಜಲಸೇನಾನಿ" ಅವಶ್ಯಕವಿರುತ್ತದೆ.

ಸಾರ್ವಜನಿಕರು ಸ್ವಇಚ್ಛೆಯಿಂದ ಭಾಗವಹಿಸುವ ಮೂಲಕ ಸಾರ್ವಜನಿಕರು ಮತ್ತು ಮಂಡಳಿಯ ನಡುವೆ ಸಹಭಾಗಿತ್ವ ಏರ್ಪಡುವ ಜೊತೆಗೆ ಸಾರ್ವಜನಿಕರ ಕುಂದು-ಕೊರತೆಗಳನ್ನು ಬಗೆಹರಿಸಲು ಸಹಾಯವಾಗುತ್ತದೆ.

ಜಲಸೇನಾನಿಯಾಗಿ ಕಾರ್ಯನಿರ್ವಹಿಸುವ ವ್ಯಕ್ತಿಗೆ ಕೆಲವು ಷರತ್ತು ಮತ್ತು ನಿಬಂಧನೆಗಳಿದ್ದು, ಹೆಚ್ಚಿನ ಮಾಹಿತಿಗೆ www.bwssb.gov.in ಗೆ ಲಾಗಿನ್ ಆಗುವ ಮೂಲಕ ಮಾಹಿತಿ ಪಡೆದು ಹೆಸರನ್ನು ನೊಂದಣಿ ಮಾಡಿಕೊಳ್ಳಬಹುದು.

## "Water Warrior" in BWSSB

****

Bengaluru, Feb 14 (Karnataka Information):

BWSSB requires a self servicing individuals who will be called as "**Water Warriors**" to create awareness among people about importance of water and to communicate the informations related to BWSSB's people friendly programs and activities like water supply and sewerage maintenance, water conservation, Rain Water Harvesting, Reuse of treated waste water, collecting details of water wastage from public, sewerage problems, unauthorized water connections and water overflow from water storage sumps and tanks officially from each and every home to BWSSB directly.

The self-initiative participation of public in this regard enables to establish a bridge between the BWSSB and public and also helps in resolving the problems of public.

These "water warriors" are subjected to few terms and conditions, more details can be obtained by logging on to BWSSB **website: www.bwssb.gov**.in and also public can register to work as "**Water Warriors**" through the same website.

## ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಮುಖ್ಯ ಮಂತ್ರಿಗಳ ಪರಿಹಾರ ನಿಧಿಗೆ ರೂ.1.00 ಕೋಟಿ ನೆರವು

ಬೆಂಗಳೂರು, ಫೆಬ್ರವರಿ 14 (ಕರ್ನಾಟಕ ವಾರ್ತೆ):

ರಾಜ್ಯದ ಕೆಲವು ಜಿಲ್ಲೆಗಳಲ್ಲಿ ತೀವ್ರ ಮಳೆಯಿಂದಾಗಿ ಪ್ರವಾಹ ಉಂಟಾದ ಹಿನ್ನಲೆಯಲ್ಲಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ವತಿಯಿಂದ 2019-20ನೇ ಸಾಲಿನಲ್ಲಿ ರೂ.1.00 ಕೋಟಿ ಮೊತ್ತವನ್ನು ಮತ್ತು ನೌಕರರ ಸಂಘದ ವತಿಯಿಂದ ಎಲ್ಲಾ ಅಧಿಕಾರಿ/ನೌಕರರ ಒಂದು ದಿನದ ವೇತನ ರೂ.71,39,209/- ಗಳನ್ನು "ಮುಖ್ಯ ಮಂತ್ರಿಗಳ ಪರಿಹಾರ ನಿಧಿಗೆ" ನೀಡಲಾಗಿತ್ತು. ಮುಂದುವರೆದಂತೆ ಪ್ರವಾಹ ಸಂತ್ರಸ್ತರಿಗೆ ಮತ್ತಷ್ಟು ನೆರವಾಗುವ ದೃಷ್ಠಿಯಿಂದ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ವತಿಯಿಂದ 2ನೇ ಬಾರಿಗೆ 2019-20 ಸಾಲಿನಲ್ಲಿ ರೂ.1.00 ಕೋಟಿ ಮೊತ್ತವನ್ನು ಡಿ.ಡಿ. ಮೂಲಕ "ಮುಖ್ಯ ಮಂತ್ರಿಗಳ ಪರಿಹಾರ ನಿಧಿಗೆ" ಸಲ್ಲಿಸಲಾಗಿದೆ. ಈ ಸಂದರ್ಭದಲ್ಲಿ ಶ್ರೀ ಬಿ.ಎ.ಬಸವರಾಜು, ಮಾನ್ಯ ನಗರಾಭಿವೃದ್ದಿ ಸಚಿವರು, ಕರ್ನಾಟಕ ಸರ್ಕಾರ, ಮಂಡಳಿಯ ಮಾನ್ಯ ಅಧ್ಯಕ್ಷರಾದ ಶ್ರೀ ತುಷಾರ್ ಗಿರಿ ನಾಥ್, ಭಾ.ಆ.ಸೇ., ರವರು , ಪ್ರಧಾನ ಅಭಿಯಂತರರಾದ ಶ್ರೀ ಕೆಂಪರಾಮಯ್ಯ ಮತ್ತು ಆರ್ಥಿಕ ಸಲಹೆಗಾರರು ಮತ್ತು ಮುಖ್ಯ ಲೆಕ್ಕಾಧಿಕಾರಿಗಳಾದ ಶ್ರೀ ಪ್ರಶಾಂತ್ ಕುಮಾರ್.ಎಂ.ವಿ., ರವರು ಉಪಸ್ಥಿತರಿದ್ದರು. ವಂದನೆಗಳೊಂದಿಗೆ, ತಮ್ಮ ವಿಶ್ವಾಸಿ ಸಹಿ/- ಸಾರ್ವಜನಿಕ ಸಂಪರ್ಕಾಧಿಕಾರಿ ಬೆಂಗಳೂರು ಜಲಮಂಡಳಿ

## ಪರಿಸರ-ಅರಣ್ಯ-ಜೀವವೈವಿಧ್ಯ ತಜ್ಞರ ನಿಯೋಗದಿಂದ ಮುಖ್ಯಮಂತ್ರಿಗಳ ಭೇಟಿ

ಬೆಂಗಳೂರು, ಫೆಬ್ರವರಿ 14 (ಕರ್ನಾಟಕ ವಾರ್ತೆ):

ವಿಧಾನಸೌಧದ ಮಾನ್ಯ ಮುಖ್ಯಮಂತ್ರಿಗಳ ಕಛೇರಿಯಲ್ಲಿ ಮುಖ್ಯಮಂತ್ರಿ. ಬಿ.ಎಸ್.ಯಡಿಯೂರಪ್ಪ ಅವರನ್ನು ಅರಣ್ಯ ಜೀವವೈವಿಧ್ಯ ಕ್ಷೇತ್ರದ ತಜ್ಞರ ನಿಯೋಗ ಭೇಟಿ ಮಾಡಿ 2020-21 ಬಜೆಟ್‌ನಲ್ಲಿ ನಾಡಿನ ಜನತೆಯ ಗಮನ ಸೆಳೆಯಬಹುದಾದ ಸುಸ್ಥಿರ ಅಭಿವೃದ್ಧಿಗೆ ಪೂರಕವಾದ ಈ ಕೆಳಗಿನ ವಿಶೇಷ ಕಾರ್ಯಯೋಜನೆಗಳನ್ನು ಸೇರ್ಪಡೆ ಮಾಡಲು ಮನವಿ ಸಲ್ಲಿಸಿತು.

**<u>ನದಿ ಮೂಲ ಸಂರಕ್ಷಣಾ ಯೋಜನೆ:</u>** ಕರ್ನಾಟಕದಲ್ಲಿ 22 ಪ್ರಮುಖ ನದಿಗಳು ಹಾಗೂ ಸುಮಾರು 180 ಉಪ ನದಿಗಳ ಮೂಲಗಳಿವೆ. ಈ ನದೀ ಮೂಲಗಳ (River Origins) ಸಂವರ್ಧನೆ ಸಂರಕ್ಷಣೆಗೆ ವಿಶೇಷ ಯೋಜನೆ ರೂಪಿಸಿ ಜಾರಿ ಮಾಡಬೇಕು. ಈ ಕುರಿತು ಪಶ್ಚಿಮ ಘಟ್ಟ ಕಾರ್ಯಪಡೆ 2013 ರಲ್ಲಿ ವಿಶೇಷ ಅಭಿಯಾನ ನಡೆಸಿತ್ತು. ಹಲವಾರು ಸಂಸ್ಥೆಗಳು, ವಿಜ್ಞಾನಿಗಳು, ಧಾರ್ಮಿಕ ಮುಖಂಡರು ನದೀಮೂಲ ರಕ್ಷಣೆಗೆ ಸರ್ಕಾರಕ್ಕೆ ಮನವಿ ಮಾಡಿದ್ದಾರೆ. ನದೀ ಮೂಲ ಸಂರಕ್ಷಣಾ ಯೋಜನೆ ಎಂಬ ಹೆಸರಿನಲ್ಲಿ ಕ್ರಿಯಾ ಯೋಜನೆ ರೂಪಿಸಬೇಕು. ಸಮೀಕ್ಷೆ, ಜಾಗೃತಿ, ಸಂರಕ್ಷಣಾ ಯೋಜನೆ ಜಾರಿ ಹೀಗೆ ಸಮಗ್ರ ಯೋಜನೆಯನ್ನು ಬಜೆಟ್‌ನಲ್ಲಿ ಘೋಷಿಸಿದರೆ ದೇಶದಲ್ಲೇ ಮೊದಲ "ನದೀಮೂಲ ಉಳಿಸಿ" ಯೋಜನೆ ಎನಿಸಿಕೊಳ್ಳಲಿದೆ. **(ಅರಣ್ಯ ಇಲಾಖೆ)**

**<u>ಬಯಲು ಸೀಮೆಯ ವನವಿಕಾಸ ಯೋಜನೆ:</u>** ಉತ್ತರ ಕರ್ನಾಟಕ–ಕಲ್ಯಾಣ ಕರ್ನಾಟಕ ಸೇರಿದಂತೆ ಬಯಲು ಸೀಮೆಯಲ್ಲಿ ಫಲವತ್ತಾದ ಭೂ ಪ್ರದೇಶ ಮರುಭೂಮಿ ಆಗುವ ಹಂತ ತಲುಪಿದೆ. ನಾಡಿನ ವಿಜ್ಞಾನಿಗಳು ಎಚ್ಚರಿಕೆ ನೀಡುತ್ತಲೇ ಇದ್ದಾರೆ. ಈ ಪ್ರದೇಶದಲ್ಲಿ ಹಸಿರು ಹೆಚ್ಚಿಸಿದರೆ ಜಲ–ವನ ಸಮೃದ್ಧಿ ಆಗಲಿದೆ. ರೈತರ ಸಮೃದ್ಧಿಯೂ ಸಾಧ್ಯವಾಗುತ್ತದೆ. ಆದ್ದರಿಂದ **<u>ಬಯಲು ಸೀಮೆಯ ವನವಿಕಾಸ ಯೋಜನೆ</u>** ಎಂಬ ಹೆಸರಿನ ವಿಶೇಷ ಯೋಜನೆಯನ್ನು ಉತ್ತರ ಕರ್ನಾಟಕ, ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿ ರೂಪಿಸಬೇಕು. **(ಅರಣ್ಯ ಇಲಾಖೆ)**

ಉ.ಕ ಜಿಲ್ಲೆಯಲ್ಲಿ 50,000 ಹೆಕ್ಟೇರ್ ಸೊಪ್ಪಿನ ಬೆಟ್ಟ ಪ್ರದೇಶವಿದೆ. ರೈತರ ಸಹಭಾಗಿತ್ವದಲ್ಲಿ 5000 ಹೆಕ್ಟೇರ್ ಸೊಪ್ಪಿನ ಬೆಟ್ಟ ಅಭಿವೃದ್ಧಿ ಯೋಜನೆಯನ್ನು ಈ ಬಜೆಟ್‌ನಲ್ಲಿ ಸೇರ್ಪಡೆ ಮಾಡಬೇಕು. ರೈತರು ಹಸಿರು ಬೆಳೆಸಲು, ಮುಂದಾಗಲು ಇದರಿಂದ ಸಾಧ್ಯವಾಗುತ್ತದೆ. **(ಅರಣ್ಯ ಇಲಾಖೆ)**

**<u>ದೇವರಕಾಡು–ಕಾನು ಅಭಿವೃದ್ಧಿ ಯೋಜನೆ:</u>** ಶಿವಮೊಗ್ಗಾ ಜಿಲ್ಲೆ ಸೇರಿದಂತೆ ಮಲೆನಾಡು ಪ್ರದೇಶದಲ್ಲಿ ದೇವರಕಾಡು–ಕಾನುಗಳ ಸಂರಕ್ಷಣೆ & ಅಭಿವೃದ್ಧಿ ಯೋಜನೆಯನ್ನು 2008–2013 ರಲ್ಲಿ ಸರ್ಕಾರ ಜಾರಿ ಮಾಡಿತ್ತು. ಈಗ ಈ ಯೋಜನೆ ನಿಂತಿದೆ. ಗ್ರಾಮೀಣ ಜನರೇ ಮುಂದಾಗಿ ಬಂದು ದೇವರ ಕಾಡು ಅಭಿವೃದ್ಧಿ ಮಾಡಬೇಕು ಎಂದು ಬೇಡಿಕೆ ಸಲ್ಲಿಸುತ್ತಿದಾರೆ. ಬಹು ಜನಪ್ರಿಯವಾಗಿದ್ದ ದೇವರ ಕಾಡು–ಕಾನು ಅಭಿವೃದ್ಧಿ ಯೋಜನೆಯನ್ನು ಪುನಃ ಜಾರಿಗೆ ತರಬೇಕು. ಭಾರತ ಸರ್ಕಾರ ದೇವರ ಕಾಡು ಯೋಜನೆ ಬಗ್ಗೆ ಶ್ಲಾಘನೆ ಮಾಡಿದೆ ಎಂಬುದನ್ನು ನೆನಪಿಸುತ್ತೇವೆ. **(ಅರಣ್ಯ ಇಲಾಖೆ)**

**<u>ಕರಾವಳಿ ಹಸಿರು ಕವಚ ಯೋಜನೆ:</u>** ಕರಾವಳಿ ಪ್ರದೇಶದಲ್ಲಿ ಹಸಿರು ಬೆಳೆಸುವ ವಿಶೇಷ ಯೋಜನೆ ಕರಾವಳಿ ಹಸಿರು ಕವಚವನ್ನು 2010 ರಲ್ಲಿ ಪ್ರಾರಂಭಿಸಲಾಗಿತ್ತು. ಈ ಯೋಜನೆಯಿಂದ ಸಮುದ್ರ ಕೊರೆತ

ತಡೆಗಟ್ಟಲು, ಸುನಾಮಿ ತಡೆಯಲು ಸಹಾಯವಾಗುತ್ತದೆ ಎಂದು ವಿಜ್ಞಾನಿಗಳು ಅಧ್ಯಯನ ಮಾಡಿ ತಿಳಿಸಿದ್ದಾರೆ. ಕೇಂದ್ರ ಪರಿಸರ ಅರಣ್ಯ ಮಂತ್ರಾಲಯ ಮೆಚ್ಚಿ ಬೇರೆ ರಾಜ್ಯಗಳಿಗೆ ಮಾದರಿ ಇದು ಎಂದು ಅಭಿಪ್ರಾಯ ನೀಡಿದ್ದರು. ಹಿಂದಿನ ಸರ್ಕಾರ ಈ ಯೋಜನೆಯನ್ನು ನಿಲ್ಲಿಸಿತ್ತು. ಕರಾವಳಿಯ ಪರಿಸರ ರಕ್ಷಣೆಗೆ ಮಹತ್ವದ ಕೊಡುಗೆ ನೀಡುವ ಮೀನುಗಾರರು, ರೈತರು ಇಷ್ಟಪಟ್ಟಿರುವ ಕರಾವಳಿ ಹಸಿರು ಕವಚ ಎಂಬ ವನೀಕರಣ ಯೋಜನೆಯನ್ನು ಪುನಃ ಜಾರಿಗೆ ತರಬೇಕು. **(ಅರಣ್ಯ ಇಲಾಖೆ)**

**<u>ಬಿದಿರು ಬಂಗಾರ ಯೋಜನೆ:-</u>** ಈಗಾಗಲೇ ಕೇಂದ್ರ ಸರ್ಕಾರ ಬಿದಿರು ಬೆಳೆಸುವ ಮೂಲಕ ಅರಣ್ಯ ಮತ್ತು ರೈತರ, ಗ್ರಾಮೀಣ ಆರ್ಥಿಕ ಅಭಿವೃದ್ಧಿ ಮಾಡುವ ಯೋಜನೆ ರೂಪಿಸಿದೆ. ಇದಕ್ಕೆ ರಾಜ್ಯ ಸರ್ಕಾರ ಮ್ಯಾಚಿಂಗ್ ಗ್ರಾಂಟ್ ನೀಡಿ (ಪೂರಕ ಅನುದಾನ) ರೈತರ ಸಹಭಾಗಿತ್ವದ ಬಿದಿರು ಬಂಗಾರ ಯೋಜನೆ ಜಾರಿ ಮಾಡಬೇಕು. **(ಅರಣ್ಯ ಇಲಾಖೆ)**

ಕರ್ನಾಟಕ ಜೀವ ವೈವಿಧ್ಯ ಮಂಡಳಿ ರಾಜ್ಯದ ವಿನಾಶದ ಅಂಚಿನ ಔಷಧೀ ಸಸ್ಯಗಳ ಗಣತಿ–ಅಭ್ಯಾಸ ಮಾಡಿದೆ. ಈ ಮಾಹಿತಿ ಹಿನ್ನೆಲೆಯಲ್ಲಿ ಬಯಲು ಸೀಮೆ ಹಾಗೂ ಮಲೆನಾಡಿನಲ್ಲಿ ಸುಮಾರು 5000 ಎಕರೆ ಪ್ರದೇಶದಲ್ಲಿ 25 ಸ್ಥಳಗಳಲ್ಲಿ ಔಷಧಿ ಸಸ್ಯಗಳನ್ನು ಬೆಳೆಸಲು ಹಾಗೂ ಈಗ ಇರುವ ಔಷಧಿ ಮೂಲಿಕೆಗಳನ್ನು ಸಂರಕ್ಷಣೆ ಮಾಡಲು ವಿಶೇಷ ಯೋಜನೆ ರೂಪಿಸಿ ಜಾರಿ ಮಾಡಬೇಕು. ಇದಕ್ಕೆ <u>ಆಯುರ್ವೇದ ವನಗಳಸಂರಕ್ಷಣೆ–ಸಂವರ್ಧನಾ ಯೋಜನೆ</u> ಎಂದು ಹೆಸರಿನಲ್ಲಿ ಪ್ರಕಟಿಸಬೇಕು **(ಅರಣ್ಯ ಇಲಾಖೆ)**

8) **<u>ರೈತರಿಗೆ ಸೋಲಾರ್ ಯೋಜನೆ:-</u>** ನಾಡಿನ ರೈತರು ಹಳ್ಳಿಗಳಲ್ಲಿ ಗೃಹಬಳಕೆ ವಿದ್ಯುತ್ ಸರಬರಾಜು ವ್ಯತ್ಯಯದಿಂದ ತೊಂದರೆ ಅನುಭವಿಸುತ್ತಾರೆ. ರೈತರ ಮಕ್ಕಳು ರಾತ್ರಿ ಓದಲು ಸಹಾ ಇದರಿಂದ ತೊಂದರೆ ಇದೆ. ಇದನ್ನು ತಪ್ಪಿಸಲು ರೈತರಿಗೆ 24 ಘಂಟೆ ಮನೆ ಬಳಕೆಗೆ ವಿದ್ಯುತ್ ಹಾಗೂ ನೀರು ಕಾಯಿಸಲು ಸೋಲಾರ್ ಯೋಜನೆಯನ್ನು ರೂಪಿಸಬೇಕು. ರೈತರ ಮನೆ ಬಳಕೆ ಸೋಲಾರ್ ವಿದ್ಯುತ್ ಹಾಗೂ ಸ್ನಾನದ ನೀರು ಕಾಯಿಸಲು ಸೋಲಾರ್ ಯೋಜನೆಯನ್ನು ಜಾರಿ ಮಾಡಬೇಕು. ಇದಕ್ಕಾಗಿ ಮುಂದೆ ಬರುವ ರೈತರಿಗೆ 50% (ಸುಮಾರು ರೂ 20000 ಸಬ್ಸಿಡಿ) ಸಬ್ಸಿಡಿ ನೀಡುವ ಯೋಜನೆಯನ್ನು ಜಾರಿ ಮಾಡಬೇಕು. **(ಗ್ರಾಮೀಣಾಭಿವೃದ್ಧಿ ಇಲಾಖೆ)**

**ಹಿತ್ತಲು–ಹೊನ್ನು ಯೋಜನೆ:–** ಮಹಿಳೆಯರು ಗ್ರಾಮೀಣ ಪ್ರದೇಶದಲ್ಲಿ ಹಿತ್ತಲು–ತರಕಾರಿ–ಹಣ್ಣಿನ ಗಿಡ ಬೆಳೆಸಲು ಪ್ರೋತ್ಸಾಹ ನೀಡಲು ಹಿತ್ತಲು ಹೊನ್ನು ಎಂಬ ವಿಶೇಷ ಯೋಜನೆ ರೂಪಿಸಬೇಕು. ಅದಕ್ಕಾಗಿ ತೋಟಗಾರಿಕಾ ಇಲಾಖೆ ಮೂಲಕ ಸಬ್ಸಿಡಿ ನೀಡಿ, ತರಬೇತಿ ನೀಡುವ ಯೋಜನೆ ರೂಪಿಸಬೇಕು. **(ತೋಟಗಾರಿಕೆ ಇಲಾಖೆ)**

ರಾಜ್ಯದಲ್ಲಿ ಸಣ್ಣ–ದೊಡ್ಡ36000 ಕೆರೆಗಳಿವೆ. ರೈತರ, ಗ್ರಾಮೀಣ ಬದುಕು ಸಹ್ಯವಾಗಲು ಕೆರೆಗಳನ್ನು ಉಳಿಸಲೇ ಬೇಕು. ಪ್ರತಿ ಜಿಲ್ಲೆಯಲ್ಲಿ 100 ಕೆರೆಗಳನ್ನು ಪುನಶ್ಚೇತನಗೊಳಿಸುವ ಯೋಜನೆಯನ್ನು ಸಣ್ಣ ನೀರಾವರಿ ಇಲಾಖೆ ಜನರ ಸಹಭಾಗಿತ್ವದಲ್ಲಿ ಜಾರಿ ಮಾಡಬೇಕು. **(ಸಣ್ಣನೀರಾವರಿ ಇಲಾಖೆ)**

ಈ ನಿಯೋಗದ ನೇತೃತ್ವವನ್ನು ಜೀವವೈವಿಧ್ಯ ಮಂಡಳಿ ಅಧ್ಯಕ್ಷ ಶ್ರೀ.ಅನಂತ ಹೆಗಡೆ ಅಶೀಸರ ವಹಿಸಿದ್ದರು.ಜೈವಿಕ ಇಂಧನ ತಜ್ಞ ಶ್ರೀ.ವೈ.ಬಿ.ರಾಮಕೃಷ್ಣ ಅವರು ರಾಜ್ಯದ ಜೈವಿಕ ಇಂಧನ ಅಭಿವೃದ್ಧಿ ಕುರಿತ ವಿಶೇಷ ಪ್ರಸ್ತಾವನೆ ಸಲ್ಲಿಸಿದರು.

ವಿಜ್ಞಾನಿ ಡಾ॥ಟಿ.ವಿ.ರಾಮಚಂದ್ರ, ಕೆರೆಗಳ ಸಂರಕ್ಷಣಾ ಯೋಜನೆ ಜರೂರಾಗಿದೆ ಎಂದರು.

ಮಂಗನಕಾಯಿಲೆ ಕುರಿತು ಸಂಶೋಧನಾ ತಜ್ಞರ ಸಭೆ ಏರ್ಪಡಿಸಲು, ಪರಿಸರ ತಜ್ಞ ಡಾ। ಕೇಶವ ಕೋರ್ಸೆ, ಮುಖ್ಯಮಂತ್ರಿಗಳ ಗಮನ ಸೆಳೆದರು.

ವೃಕ್ಷಲಕ್ಷ ಸಂಚಾಲಕ ಶ್ರೀ.ಬಿ.ಹೆಚ್.ರಾಘವೇಂದ್ರ ಅವರು ಕಾನು ಅಭಿವೃದ್ಧಿ ಯೋಜನೆ ಅತ್ಯವಶ್ಯಕ ಎಂದರು.

ಕಾನೂನು ತಜ್ಞ ಡಾ।ಎಂ.ಕೆ.ರಮೇಶ್ ರವರು ಜೀವವೈವಿಧ್ಯ ಕಾಯ್ದೆಯನ್ನು ರಾಜ್ಯದಲ್ಲಿ ಪರಿಣಾಮಕಾರಿಯಾಗಿ ಜಾರಿಗೆ ತರಲು ವಿನಂತಿ ಮಾಡಿದರು.

ತೋಟಗಾರಿಕಾ ವಿಶ್ವವಿದ್ಯಾಲಯದ ನಿವೃತ್ತ ಉಪ ಕುಲಪತಿ ಡಾ। ಎಸ್.ಬಿ.ದಂಡಿನ್ ಅವರು ಬೀಜ ಮಸೂದೆಗೆ ಹಲವು ತಿದ್ದುಪಡಿಗಳನ್ನು ತರಲು ಕೇಂದ್ರಕ್ಕೆ ಶಿಫಾರಸ್ಸು ಮಾಡಲು ಮನವಿ ಮಾಡಿದರು.

ಈ ಎಲ್ಲಾ ವಿಷಯಗಳಿಗೆ ಆದ್ಯತೆ ನೀಡುವ ಭರವಸೆಯನ್ನು ಮುಖ್ಯಮಂತ್ರಿಗಳು ನೀಡಿದರು ಎಂದು ಪ್ರಕಟಣೆ ತಿಳಿಸಿದರು.

# ಪ್ರಶ್ನೆ ಪತ್ರಿಕೆ ವದಂತಿಕೋರರ ವಿರುದ್ಧ ಬಿಗಿ ಕ್ರಮ:

## ಸುರೇಶ್ ಕುಮಾರ್

ಬೆಂಗಳೂರು, ಫೆಬ್ರವರಿ 14 (ಕರ್ನಾಟಕ ವಾರ್ತೆ):

ಮುಂದಿನ ತಿಂಗಳು ನಡೆಯಲಿರುವ ಪಿಯುಸಿ ಮತ್ತು ಎಸ್‍ಎಸ್‍ಎಲ್ ಸಿ ಪರೀಕ್ಷೆಗಳಲ್ಲಿ ಯಾವುದೋ ಪ್ರಶ್ನೆ ಪತ್ರಿಕೆಯನ್ನು ಈ ವರ್ಷದ್ದೆಂದು ನಂಬಿಸಿ ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟು ಗೊಂದಲ ಮೂಡಿಸುವವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಎಸ್. ಸುರೇಶ್ ಕುಮಾರ್ ಎಚ್ಚರಿಸಿದ್ದಾರೆ.

ಎಸ್‍ಎಸ್ ಎಲ್ ಸಿ ಮತ್ತು ಪಿಯುಸಿ ಪರೀಕ್ಷೆಗಳ ಸಿದ್ಧತೆ ಕುರಿತು ರಾಜ್ಯದ ಎಲ್ಲ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಪೊಲೀಸ್ ವರಿಷ್ಠಾಧಿಕಾರಿಗಳು, ಜಿಲ್ಲಾ ಮತ್ತು ಉಪವಿಭಾಗಗಳ ಖಜಾನಾಧಿಕಾರಿಗಳು ಮತ್ತು ಪಿಯು ಉಪನಿರ್ದೇಶಕ ರೊಂದಿಗೆ ಶುಕ್ರವಾರ ವಿಡಿಯೋ ಸಂವಾದ ನಡೆಸಿದ ಸಚಿವರು, ಪರೀಕ್ಷೆಗಳು ಸುಲಲಿತವಾಗಿ ಯಾವುದೇ ಗೊಂದಲವಿಲ್ಲದೇ ನಡೆಯುವ ಕುರಿತು ಸೂಚನೆಗಳನ್ನು ನೀಡಿದರು.

ಸಾಮಾಜಿಕ ಜಾಲತಾಣಗಳ ಮೂಲಕ ಗೊಂದಲ ಮೂಡಿಸುವವರ ಕುರಿತು ಸೂಕ್ತ ಕ್ರಮಕೈಗೊಳ್ಳುವ ಕುರಿತಂತೆ ಜಿಲ್ಲಾಧಿಕಾರಿಗಳು ಮತ್ತು ಪೊಲೀಸ್ ಅಧಿಕಾರಿಗಳು ತಮ್ಮ ಹಂತದಲ್ಲಿ ಸುತ್ತೋಲೆ ಹೊರಡಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು. ಪ್ರಶ್ನೆ ಪತ್ರಿಕೆ ರವಾನೆ, ಸಂರಕ್ಷಣೆಗೆ ಕೈಗೊಳ್ಳಬೇಕಾದ ಕ್ರಮಗಳನ್ನು ವಿವರಿಸಿ, ಪ್ರಶ್ನೆ ಪತ್ರಿಕೆ ರವಾನೆ ವಾಹನಗಳನ್ನು ರಾಜ್ಯದ ಯಾವುದೇ ವಾಹನ ತಪಾಸಣಾ ಕೇಂದ್ರಗಳಲ್ಲಿ ಯಾವುದೇ ರೀತಿಯಲ್ಲೂ ತಪಾಸಣೆ ಮಾಡದಂತೆ ಈಗಾಗಲೇ ಸಂಬಂಧಿಸಿದ ಇಲಾಖೆಗಳಿಗೆ ಮನವಿ ಮಾಡಲಾಗಿದೆ. ಹಾಗೆಯೇ ಆಯಾ ಜಿಲ್ಲೆಗಳಲ್ಲೂ ಅದನ್ನು ಖಚಿತಪಡಿಸಲು ಸಂಬಂಧಿಸಿದವರಿಗೆ ಡಿಸಿ ಮತ್ತು ಎಸ್ಪಿಗಳು ಮಾರ್ಗದರ್ಶನ ನೀಡಬೇಕೆಂದು ಸೂಚಿಸಿದರು.

ಪ್ರಶ್ನೆ ಪತ್ರಿಕೆಗಳನ್ನು ಆಯಾ ತಾಲೂಕು ಮತ್ತು ಜಿಲ್ಲಾ ಖಜಾನೆಯಿಂದ ಪರೀಕ್ಷಾ ಕೇಂದ್ರಗಳಿಗೆ ರವಾನಿಸಲು ಸೂಚಿಸಲಾದ ನಿಗದಿತ ಮಾರ್ಗಗಳ್ಲಲ್ಲಿಯೇ ರೂಟ್ ವಾಹನಗಳು ಸಾಗಬೇಕು ಹಾಗೆಯೇ ಪರೀಕ್ಷಾ ಸಾಮಗ್ರಿಗಳು ಪರೀಕ್ಷಾ ಸಮಯಕ್ಕೂ ಮೊದಲೇ ದೊರೆಯುವಂತೆ ಖಚಿತಪಡಿಸಿಕೊಳ್ಳುವುದು ಜಿಲ್ಲಾಡಳಿತ ಮತ್ತು ಅಪರ ಜಿಲ್ಲಾಧಿಕಾರಿ ನೇತೃತ್ವದ ಪರೀಕ್ಷಾ ಪ್ರಶ್ನೆ ಪತ್ರಿಕೆ ಪಾಲನಾ ತಂಡದ ಜವಾಬ್ದಾರಿಯಾಗಿದ್ದು, ಅದನ್ನು ಯಾವುದೇ ವ್ಯತ್ಯಯಕ್ಕೆ ಅವಕಾಶವಿಲ್ಲದಂತೆ ಮಾಡಬೇಕಿದೆ ಎಂದು ಸಚಿವರು ವಿವರಿಸಿದರು.

ಪರೀಕ್ಷಾ ಕೇಂದ್ರದೊಳಗೆ ಮಾಧ್ಯಮ ಪ್ರತಿನಿಧಿಗಳೂ ಸೇರಿದಂತೆ ಯಾರಿಗೂ ಅವಕಾಶವಿಲ್ಲ. ಕೇವಲ ಗುರುತಿನ ಚೀಟಿಯೊಂದಿಗೆ ಪರೀಕ್ಷಾ ಕರ್ತವ್ಯಕ್ಕೆ ನಿಯೋಜಿತವಾದ ಸಿಬ್ಬಂದಿ ಮಾತ್ರವೇ ಪರೀಕ್ಷಾ ಕೇಂದ್ರ ಮತ್ತು ಅದರ ಸುತ್ತಮುತ್ತ ಚಲನವಲನಕ್ಕೆ ಅವಕಾಶವಿರುತ್ತದೆ. ಹಾಗೆಯೇ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲ ಝೆರಾಕ್ಸ್ ಕೇಂದ್ರಗಳನ್ನು ಪರೀಕ್ಷೆಗಳು ಮುಗಿಯುವವರಗೆ ಮುಚ್ಚಿಸಲು ಪೊಲೀಸ್ ಇಲಾಖೆ ಅಗತ್ಯ ಕ್ರಮ ವಹಿಸವುದು ಸೇರಿದಂತೆ ಪರೀಕ್ಷೆಗೆ ಅಗತ್ಯವಾಗಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಮಾರ್ಗದರ್ಶನ ನೀಡಿದರು.

ಸೂಕ್ಷ್ಮ ಮತ್ತು ಅತಿಸೂಕ್ಷ್ಮ ಪರೀಕ್ಷಾ ಕೇಂದ್ರಗಳಿಗೆ ಹೆಚ್ಚಿನ ಪೊಲೀಸ್ ಸಿಬ್ಬಂದಿ ನಿಯೋಜನೆ ಮಾಡುವುದು ಹಾಗೂ ಸ್ವಚ್ಛ ಶೈಕ್ಷಣಿಕ ಹಿನ್ನೆಲೆಯಳ್ಳವರನ್ನು ಮಾತ್ರವೇ ನೇಮಿಸುವುದು ಸೇರಿದಂತೆ ನಿಯೋಜಿತ ಸಿಬ್ಬಂದಿಯ ಪೂರ್ವಾಪರಗಳನ್ನು ಪರಿಶೀಲಿಸಬೇಕು ಎಂದು ಅವರು ಹೇಳಿದರು. ಹಿಂದಿನ ಪರೀಕ್ಷೆಗಳಲ್ಲಿ ಗೊಂದಲ ಮೂಡಿಸಿದ ಖಜಾನೆಗಳು, ಪರೀಕ್ಷಾ ಕೇಂದ್ರಗಳು ಮತ್ತುಅದಕ್ಕೆ ಕಾರಣರಾದ ಸಿಬ್ಬಂದಿ ಹಾಗೆಯೇ ಇಂತಹ ಯಾವುದೇ ರೀತಿಯ ಗೊಂದಲ ಮೂಡಿಸಬಹುದಾದ ವ್ಯಕ್ತಿಗಳ ಕುರಿತು ಹೆಚ್ಚಿನ ನಿಗಾವಹಿಸಬೇಕು ಎಂದು ಸಚಿವರು ತಿಳಿಸಿದರು. ವಿಕಲಚೇತನರಿಗೆ ಪರೀಕ್ಷೆ ಬರೆಯಲು ಒದಗಿಸುವ ಸಹಾಯಕರನ್ನು ಒದಗಿಸುವ ಕುರಿತು ಸ್ಪಷ್ಟ ಮಾರ್ಗದರ್ಶಿ ಸೂತ್ರಗಳನ್ನು ನಿಗದಿಪಡಿಸಲಾಗಿದ್ದು, ಆ ಪ್ರಕಾರವೇ ಸಹಾಯಕರನ್ನು ಒದಗಿಸಬೇಕು. ಪರೀಕ್ಷಾರ್ಥಿ ಪರೀಕ್ಷೆಯ ಕೊನೆ ಬೆಲ್ ಬಾರಿಸುವ ಮೊದಲು ಯಾವುದೆ ಸಮಯದಲ್ಲಿ ಹೋಗುವುದಾದರೆ ಅವರಿಂದ ಪ್ರಶ್ನೆ ಪತ್ರಿಕೆಯನ್ನೂ ಪಡೆದುಕೊಂಡು ಅವರನ್ನು ಹೊರಗೆ ಕಳಿಸುವುದನ್ನು ಖಚಿತಪಡಿಸಿಕೊಳ್ಳಬೇಕು. ಪರೀಕ್ಷಾ ಕೊಠಡಿಯಲ್ಲಿಗೋಡೆ ಗಡಿಯಾರ, ಶುದ್ಧ ಕುಡಿಯವ ನೀರಿನ ವ್ಯವಸ್ಥೆ ಮಾಡಬೇಕಿರುವ ಮಾರ್ಗದರ್ಶಿ ಸೂತ್ರಗಳನ್ನು ಪಾಲಿಸುವುದು ಸೇರಿದಂತೆ ಸುಲಲಿತ ಪರೀಕ್ಷೆಗೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸೂಕ್ತ ಮಾರ್ಗದರ್ಶನ ನೀಡಿದ ಸಚಿವರು ಮಕ್ಕಳ ನೈತಿಕತೆ ಕುಂದಿಸುವ ಯಾವುದೇ ಪ್ರಕರಣಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುವುದನ್ನು ಜಿಲ್ಲಾಡಳಿತದ ಪರೀಕ್ಷಾ ತಂಡಗಳು ಖಚಿತಪಡಿಸಿಕೊಳ್ಳಬೇಕು ಎಂದರು. ಪರೀಕ್ಷೆ ಕರ್ತವ್ಯಕ್ಕೆ ನಿಯೋಜಿತರಾದವರು, ಪರೀಕ್ಷಾ ಕೇಂದ್ರಗಳು ಯಾವುದೇ ರೀತಿಯ ಕೆಟ್ಟ ವಿಚಾರಗಳಿಗೆ ಜವಾಬ್ದಾರ

ವಿಡಿಯೋ ಸಂವಾದದಲ್ಲಿ ಪದವಿಪೂರ್ವ ಇಲಾಖೆ ನಿರ್ದೇಶಕಿ ಸಿ. ಕನಗವಲ್ಲಿ, ಖಜಾನೆ ಇಲಾಖೆ ಆಯುಕ್ತ ಉಜ್ವಲ್ ಕುಮಾರ್ ಘೋಷ್ ಮತ್ತಿತರರ ಅಧಿಕಾರಿಗಳು ಭಾಗವಹಿಸಿದ್ದರು.